ಆ) ಇಲ್ಲ

ಇ) ದಿನಾಂಕ : 21-12-1993ರ ಸರ್ಕಾರಿ ಆದೇಶವನ್ನು ಮಾರ್ಪಾಟುಗೊಳಿಸಿ ದಿನಾಂಕ : 2-2-1994 ರಂದು ಆದೇಶ ಹೊರಡಿಸಲಾಗಿದೆ.

ಪಂಚಾಯಿತಿ ಚುನಾವಣೆಗಳಲ್ಲಿ ಪ.ಜಾ/ ಪ.ವರ್ಗದ ಮೀಸಲಾತಿ.

97-ಶ್ರೀ ಎಂ.ವಿ. ವೆಂಕಟಪ್ಪ (ಮುಳಬಾಗಿಲು): ಮಾನ್ಯ ಗ್ರಾ. ಅ. ಮತ್ತು ಪಂ.ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಪಂಚಾಯತ್ ಚುನಾವಣೆಗಳಲ್ಲಿ ಪರಿಶಿಷ್ಟ ಪಂಗಡದ ಜನಸಂಖ್ಯೆ ಇಲ್ಲದಿದ್ದರೂ ಸಹಾ ಅಂತಹ ಪಂಚಾಯಿತಿಗಳಲ್ಲಿ ಪರಿಶಿಷ್ಟ ಪಂಗಡದವರಿಗೆ ಮೀಸಲಾತಿ ಇಡಲಾಗಿದೆಯೇ?

ಆ) ಹಾಗಿದ್ದಲ್ಲಿ ಅಂತಹ ಪಂಚಾಯಿತಿಗಳೆಷ್ಟು? ಹಾಗೂ ಜನಸಂಖ್ಯೆ ಇಲ್ಲದಿದ್ದರೂ ಮೀಸಲಾತಿ ನಿಗದಿ ಪಡಿಸಲು ಕಾರಣಗಳೇನು. (ಜಿಲ್ಲಾವಾರು ಅಂಕಿಅಂಶಗಳನ್ನು ಒದಗಿಸುವುದು)

ಇ) ಅಂತಹ ಪಂಚಾಯಿತಿಗಳಲ್ಲಿ ಜನಸಂಖ್ಯೆ ಇಲ್ಲದ ಪ್ರಯುಕ್ತ ಯಾರೂ ಉಮೇದುವಾರಿಕೆ ಹಾಕದೆ ಖಾಲಿ ಬಿದ್ದಿರುವ ಸ್ಥಾನಗಳೆಷ್ಟು? (ಜಿಲ್ಲಾವಾರು ಅಂಕಿ ಅಂಶಗಳನ್ನು ಒದಗಿಸುವುದು)

ಶ್ರೀ ಎಂ. ವೈ. ಘೋರ್ಪಡೆ (ಗ್ರಾಮೀಣ ಅಭಿವೃದ್ಧಿ ಮತ್ತು ಪಂ.ರಾಜ್ ಸಚಿವರು):

ಅ) ರಾಜ್ಯದಲ್ಲಿನ ಗ್ರಾಮ ಪಂಚಾಯಿತಿ ಪಂಚಾಯಿತಿ ಚುನಾವಣೆಗಳಲ್ಲಿ 1993ರ ರಾಜ್ಯ ಕಾಯಿದೆಯನ್ವಯ ಪರಿಶಿಷ್ ಪಂಗಡದ ಜನರಿಗೆ ಮೀಸಲಾತಿಯನ್ನು ಸದರಿ ಪಂಗಡದ ಜನಸಂಖ್ಯೆಗನುಗುಣವಾಗಿ, ಹಾಗೂ ಶೇ. 3 ಕ್ಕಿಂತ ಕಡಿಮೆ ಇಲ್ಲದಷ್ಟು ಸ್ಥಾನಗಳನ್ನು ಪ್ರತಿ ಗ್ರಾಮಮ ಪಂಚಾಯತ್ಗಳಲ್ಲಿ ಮೀಸಲಾಗಿಡಲಾಗಿದೆ.

ಆ) ದಿನಾಂಕ : 20-2-94 ರಂದು ಚುನಾವಣೆ ನಡೆದ ನಂತರ ಮಾಹಿತಿ ಲಭ್ಯವಾಗುವುದು.

ಇ) -ಅದೇ-

ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಹಾರ್ನಹಳ್ಳಿ ರಾಮಸ್ವಾಮಿ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಅಧ್ಯಕ್ಷರೇ 94ರ ಲಿಖಿತ ಮೂಲಕ ಉತ್ತರಿಸುವ 3ನೇ ಪಟ್ಟಿಯಲ್ಲಿರುವ 11 ಪ್ರಶ್ನೆಗಳ ಪೈಕಿ, ಪ್ರಶ್ನೆಗಳ ಸಂಖ್ಯೆ 99 98 120 ಪ್ರಶ್ನೆಗಳನ್ನು ಹೊರತುಪಡಿಸಿ ಇನ್ನುಳಿದ 8 ಚುಕ್ಕೆಗುರುತಿಲ್ಲದ ಪ್ರಶ್ನೆಗಳ ಉತ್ತರಗಳನ್ನು ಸಭೆಯ ಮುಂದೆ ಮಂಡಿಸುತ್ತಿದ್ದೇನೆ.

ಮುಳಬಾಗಿಲು ಟೌನ್‌ನಲ್ಲಿ ಸ್ಟೇಡಿಯಂ ನಿರ್ಮಾಣ

101-ಶ್ರೀ ಎಂ.ವಿ. ವೆಂಕಟಪ್ಪ (ಮುಳಬಾಗಿಲು): ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮುಳಬಾಗಿಲು ಟೌನ್ನಲ್ಲಿ ಸ್ಟೇಡಿಯಂ ಒಂದನ್ನು ಕಟ್ಟಲು ಜಿಲ್ಲಾ ಪರಿಷತ್ತಿನವರು ಮಂಜೂರು ಮಾಡಿರುವ ಹಣ ಎಷ್ಟು?